ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: 16 ಸಮಾಜಕಲ್ಯಾಣ ಇಲಾಖೆ

ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ ದಿನಾಂಕ : DATE 7/2/21

# ‘ಪ್ರವರ್ಗ 2ಎ ಮೀಸಲಾತಿ ನೆಪಮಾತ್ರಕ್ಕೆ’

ಪ್ರಜಾವಾಣಿ ವಾರ್ತೆ 7-2-21

ಚಿತ್ರದುರ್ಗ: ಪ್ರವರ್ಗ 2 ‘ಎ’ ಪಟ್ಟಿಯಲ್ಲಿರುವ ದೇವಾಂಗ ಸಮುದಾಯಕ್ಕೆ ಮೀಸಲಾತಿ ಸೌಲಭ್ಯ ಸರಿಯಾಗಿ ಸಿಗುತ್ತಿಲ್ಲ ಎಂದು ಹಂಪಿಯ ಹೇಮಕೂಟದ ದೇವಾಂಗ ಗಾಯತ್ರಿ ಪೀಠದ ದಯಾನಂದಪುರಿ ಸ್ವಾಮೀಜಿ ದೂರಿದರು.’

ಪ್ರವರ್ಗ 2 ‘ಎ’ ಮೀಸಲಾತಿ ನೆಪಮಾತ್ರಕ್ಕೆ ಎಂಬಂತಿದೆ. ಅನೇಕ ಸಹೋದರ ಸಮುದಾಯಗಳು ಇದರಡಿ ಸೌಲಭ್ಯ ಕಬಳಿಸುತ್ತಿರುವುದರಿಂದ ದೇವಾಂಗ ಸಮುದಾಯ ವಂಚಿತವಾಗುತ್ತಿದೆ ಎಂದು ಶನಿವಾರ ಪತ್ರಿಕಾಗೋಷ್ಠಿಯಲ್ಲಿ ಅವರು ಅಸಮಾಧಾನ ಹೊರಹಾಕಿದರು.



ದಯಾನಂದ ಪುರಿ ಸ್ವಾಮೀಜಿ

‘ರಾಜ್ಯದಲ್ಲಿ ಸುಮಾರು 30 ಲಕ್ಷ ಜನಸಂಖ್ಯೆ ಹೊಂದಿರುವ ಸಮುದಾಯ ಆರ್ಥಿಕ, ರಾಜಕೀಯ ಹಾಗೂ ಸಾಮಾಜಿಕವಾಗಿ ಹಿಂದುಳಿದಿದೆ. ಸಮುದಾಯಕ್ಕೆ ಸಾಮಾಜಿಕ ನ್ಯಾಯ ದೊರಕಿಸಿಕೊಡುವ ನಿಟ್ಟಿನಲ್ಲಿ ಹೋರಾಟಕ್ಕೆ ಮುಂದಾಗಲು ಆಲೋಚನೆ ಮಾಡಲಾಗುತ್ತಿದೆ’ ಎಂದರು.

‘ಮಕ್ಕಳಿಗೆ ಶಿಕ್ಷಣ ಕೊಡಿಸಲು ಸಾಧ್ಯವಾಗದ ದುಸ್ಥಿತಿಯಲ್ಲಿ ಸಮುದಾಯದ ಜನರಿದ್ದಾರೆ. ವಿದ್ಯಾರ್ಥಿಗಳ ಶೈಕ್ಷಣಿಕ ಬೆಳವಣಿಗೆಗಾಗಿ ಮಹಾರಾಷ್ಟ್ರ ಮಾದರಿಯಲ್ಲಿ ಪ್ರತ್ಯೇಕ ಮೀಸಲಾತಿ ಸೌಲಭ್ಯ ಕಲ್ಪಿಸಬೇಕು’ ಎಂದು ಒತ್ತಾಯಿಸಿದರು.